KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPINGS
DEPARTMENT / SUBJECT:
NAME OF THE NEWS PAPER:
DATE:

# ಚಳಿಗಾಲದ ಅಧಿವೇಶನಕ್ಕೆ ವಿವಾದದ ಬಿಸಿ

ಬೆಂಗಳೂರು: ಈ ಬಾರಿ ಚಳಿಗಾಲದ ಅಧಿವೇಶನವನ್ನು ಬೆಳಗಾವಿ ಬದಲು ಬೆಂಗಳೂರಿನಲ್ಲಿ ನಡೆಸಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮ ರಾಜಕೀಯ ವಿವಾದದ ಧೂಳೆಬ್ಬಿಸಿದೆ.

ಮುಂದಿನ ತಿಂಗಳು 14ರಿಂದ 26ರವರೆಗೆ ಬೆಂಗಳೂರಿನಲ್ಲಿ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ. ಪ್ರತಿ ವರ್ಷ ಅಕ್ಟೋಬರ್‌ನಿಂದ ಡಿಸೆಂಬರ್ ಅವಧಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನ ಗಡಿ ಜಿಲ್ಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತಿತ್ತು. ಈ ಬಾರಿಯೂ ಅಲ್ಲಿಯೇ ನಡೆಯುವ ನಿರೀಕ್ಷೆಯಿತ್ತು. ಆದರೆ ಮೊನ್ನೆ ನಡೆದ ಸಂಪುಟ ಸಭೆ ಬೆಂಗಳೂರಿನಲ್ಲಿ ನಡೆಸುವ ಬಗ್ಗೆ ತೀರ್ಮಾನ ಕೈಗೊಂಡಿದೆ.

ಬೆಳಗಾವಿ ಸೇರಿದಂತೆ ಉತ್ತರಕರ್ನಾಟಕ ಭಾಗದಲ್ಲಿ ಕಾಣಿಸಿಕೊಂಡಿರುವ ನೆರೆಯ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ಅಧಿವೇಶನ ನಡೆಸದೇ ಇರಲು ತೀರ್ಮಾನಿಸಲಾಗಿದೆ ಎಂದು ಸರ್ಕಾರ ಹೇಳುತ್ತದೆ. ಸಂಪುಟ ಸಭೆಯಲ್ಲಿಯೂ ಈ ಬಗ್ಗೆ ಗಂಭೀರ ಚರ್ಚೆ ನಡೆದಿದೆ. ಬೆಳಗಾವಿಯಲ್ಲಿ ಅಧಿವೇಶನ ನಡೆಸಬೇಕು ಎಂದು ಉತ್ತರ ಕರ್ನಾಟಕ ಭಾಗದ ಹಲವು ಸಚಿವರು ಆಗ್ರಹಿಸಿದರು. ಆದರೆ ನೆರೆಯ ಹಿನ್ನೆಲೆಯಲ್ಲಿ ಅಧಿವೇಶನ ನಡೆಸುವುದು ಕಷ್ಟ. ಆದ್ದರಿಂದ ಈ ಬಾರಿ ಇಲ್ಲಿಯೇ ಅಧಿವೇಶನ ನಡೆಸಬೇಕು ಎಂಬ ಅಭಿಪ್ರಾಯಕ್ಕೆ ಬರಲಾಯಿತು. ಬೆಳಗಾವಿ ಸೇರಿದಂತೆ ಆ ಭಾಗದ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೇರಿದಂತೆ ಎಲ್ಲಾ ಹಂತದ ಅಧಿಕಾರಿಗಳೂ ನೆರೆ ಪರಿಹಾರ ಕಾರ್ಯದಲ್ಲಿ ತೊಡಗಿದ್ದಾರೆ. ಇಂತಹ ಸಂದರ್ಭದಲ್ಲಿ ಅವರನ್ನು ಅಧಿವೇಶನದ ಕರ್ತವ್ಯಕ್ಕೆ ನಿಯೋಜನೆ ಮಾಡಿದರೆ ಪರಿಹಾರ ಕಾರ್ಯ ನಿಂತು ಹೋಗುತ್ತದೆ ಎಂದು ಹಿರಿಯ ಅಧಿಕಾರಿಗಳು ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

ಈ ಭಾಗದ ಜಿಲ್ಲೆಗಳಲ್ಲಿ ವಿಶೇಷವಾಗಿ ಬೆಳಗಾವಿಯಲ್ಲಿ ಪರಿಹಾರ ಕಾರ್ಯ ಇನ್ನೂ ಭರದಿಂದ ಸಾಗಿದೆ. ಜಿಲ್ಲಾಧಿಕಾರಿಗಳು ಸೇರಿದಂತೆ ಕೆಳಹಂತದ ಅಧಿಕಾರಿಗಳು ಪರಿಹಾರ ವಿತರಣೆ, ಕಾಳಜಿ ಕೇಂದ್ರಗಳ ಮೇಲ್ವಿಚಾರಣೆ ಮುಂತಾದ ಕಾರ್ಯಗಳ ಉಸ್ತುವಾರಿಯಲ್ಲಿ ತೊಡಗಿದ್ದಾರೆ. ಅಧಿವೇಶನ ನಡೆಸಿದರೆ ಇಡೀ ಆಡಳಿತ ಯಂತ್ರವೇ ಅದಕ್ಕೆ ಪೂರಕವಾಗಿ ಕೆಲಸ ಮಾಡಬೇಕಾಗಿ ಬರುವುದರಿಂದ ಬೆಳಗಾವಿಯಲ್ಲಿ ಅಧಿವೇಶನ ನಡೆಸದೇ ಇರಲು ತೀರ್ಮಾನಿಸಲಾಗಿದೆ ಎಂದು ಹಿರಿಯ ಸಚಿವರೊಬ್ಬರು ತಿಳಿಸಿದರು.

ಆದರೆ ಪ್ರತಿಪಕ್ಷಗಳು ಇದನ್ನು ಒಪ್ಪುತ್ತಿಲ್ಲ. ಬೆಳಗಾವಿ ಸೇರಿದಂತೆ ಉತ್ತರಕರ್ನಾಟಕ ಜಿಲ್ಲೆಗಳಲ್ಲಿ ಪರಿಹಾರ ಕಾರ್ಯ ಸುಸೂತ್ರವಾಗಿ ನಡೆಯುತ್ತಿಲ್ಲ. ಸಾಕಷ್ಟು ದೋಷಗಳಿವೆ. ಬೆಳಗಾವಿಯಲ್ಲಿ ಅಧಿವೇಶನ ನಡೆಸಿದರೆ ಸಂತ್ರಸ್ತರು ಹಾಗೂ ಸಾರ್ವಜನಿಕರ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂಬ ಭಯದಿಂದ ಸರ್ಕಾರ ಹಿಂದೇಟು ಹಾಕಿದೆ ಎಂದು ಪ್ರತಿಪಕ್ಷ ಕಾಂಗ್ರೆಸ್, ಜೆಡಿಎಸ್ ಆರೋಪಿಸಿವೆ. ಸಂತ್ರಸ್ತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಬೆಳಗಾವಿಯಲ್ಲಿಯೇ ಅಧಿವೇಶನ ನಡೆಸಬೇಕು ಎಂದು ಮಾಜಿ ಗೃಹ ಸಚಿವ ಎಂ.ಬಿ.ಪಾಟೀಲ್ ಆಗ್ರಹಿಸಿದ್ದಾರೆ. ಆದರೆ ಸರ್ಕಾರ ತನ್ನ ನಿಲುವಿನಿಂದ ಹಿಂದೆ ಸರಿದಿಲ್ಲ. ಬೆಂಗಳೂರು ಅಧಿವೇಶನಕ್ಕೆ ಸಕಲ ಸಿದ್ಧತೆ ನಡೆದಿದೆ.



- ಸರ್ಕಾರದ ನಿರ್ಧಾರಕ್ಕೆ ಪ್ರತಿಪಕ್ಷ ಆಕ್ಷೇಪ
- ನೆರೆ ಹಿನ್ನೆಲೆಯಲ್ಲಿ ನಿರ್ಧಾರ ಬದಲು

## ಅಸಾಧ್ಯ

ಬೆಳಗಾವಿ ಸೇರಿದಂತೆ ಉತ್ತರಕರ್ನಾಟಕ ಜಿಲ್ಲೆಗಳ ಅಧಿಕಾರಿಗಳು ಪರಿಹಾರ ಕಾರ್ಯದಲ್ಲಿ ಬಿಡುವಿಲ್ಲದೇ ತೊಡಗಿದ್ದಾರೆ. ಆದ್ದರಿಂದ ಅಲ್ಲಿ ಅಧಿವೇಶನ ನಡೆಸುವುದು ಅಸಾಧ್ಯ

■ ಜೆ.ಸಿ.ಮಾಧುಸ್ವಾಮಿ,
ಸಂಸದೀಯ ವ್ಯವಹಾರ ಸಚಿವ.

## ಸರ್ಕಾರದ ನಿರ್ಧಾರದಿಂದ ಭಾರೀ ಉಳಿತಾಯ

ಬೆಳಗಾವಿ ಬದಲಾಗಿ ಬೆಂಗಳೂರಿನಲ್ಲಿ 10 ದಿನಗಳ ಅಧಿವೇಶನ ನಡೆಸುವುದರಿಂದ ಬೆಳಗಾವಿಯಲ್ಲಿ ನಡೆಯುತ್ತಿದ್ದ ಒಟ್ಟು ಖರ್ಚಿನಲ್ಲಿ ಶೇ.90ರಷ್ಟು ಹಣ ಉಳಿಸಬಹುದು ಎಂದು ಸ್ಪೀಕರ್ ಕಚೇರಿ ಮೂಲಗಳು ತಿಳಿಸಿವೆ. ಕಳೆದ ಬಾರಿ ಬೆಳಗಾವಿಯಲ್ಲಿ 10 ದಿನ ಅಧಿವೇಶನ ನಡೆಸಿದ ಪರಿಣಾಮ ಸುಮಾರು 13 ಕೋಟಿ ರೂ. ವೆಚ್ಚ ಆಗಿತ್ತು. ಈ ಬಾರಿ ಅಲ್ಲಿ ನಡೆಸಿದ್ದರೆ 15 ಕೋಟಿ ಆಗುವ ಸಾಧ್ಯತೆಯಿತ್ತು. ಆದರೆ ಬೆಂಗಳೂರಿನಲ್ಲಿ ಅಧಿವೇಶ ನಡೆಸಿದರೆ ಶಾಸಕರ ಭತ್ಯೆ, ಉಭಯ ಸಭಾಂಗಣಗಳು ಹಾಗೂ ಮೊಗಸಾಲೆಗಳ ವಿದ್ಯುತ್ ಬಿಲ್, ನೀರಿನ ಬಿಲ್‌ನಲ್ಲಿ ಸ್ವಲ್ಪ ಹೆಚ್ಚಳ ಹೊರತಾಗಿ ಅಧಿಕ ವೆಚ್ಚದಬಾಬು ಇರುವುದಿಲ್ಲ.

ಬೆಳಗಾವಿಯಲ್ಲಿ ಅಧಿವೇಶನ ನಡೆಸಿದೆ ಉಭಯ ಸದನಗಳ 300 ಮಂದಿ ಸದಸ್ಯರು ಅವರ ಸಿಬ್ಬಂದಿ, ಸಚಿವಾಲಯ ಸಿಬ್ಬಂದಿ, ಪತ್ರಕರ್ತರು. ಮಾರ್ಷಲ್‌ಗಳು, ಪೊಲೀಸರು ಸೇರಿದಂತೆ ಸುಮಾರು 3 ಸಾವಿರ ಮಂದಿಗೆ 10 ದಿನಗಳ ಕಾಲ ಊಟ, ವಸತಿ, ಸಾರಿಗೆ ಇತ್ಯಾದಿ ವ್ಯವಸ್ಥೆಗಾಗಿ ಕೋಟ್ಯಾಂತರ ರೂ. ವೆಚ್ಚ ಆಗುತ್ತದೆ.

## ಬೆಳಗಾವಿ ಸೂಕ್ತ

ಸರ್ಕಾರ ಬೆಳಗಾವಿಯಲ್ಲಿಯೇ ಅಧಿವೇಶನ ನಡೆಸಿ ಸಂತ್ರಸ್ತರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹುಡುಕಬೇಕು

■ ಎಂ.ಬಿ.ಪಾಟೀಲ್,
ಮಾಜಿ ಗೃಹ ಸಚಿವ.